**ಕರ್ನಾಟಕ ಸರ್ಕಾರ**

ಸಂಖ್ಯೆ: ಕೌಉಜೀಇ 44 ಕೌಗುಇ 2022

ಇ-ಕಡತ ಸಂ.KSRLPS/LH-NF/39/2021-22

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ<br>ಮತ್ತು ಜೀವನೋಪಾಯ ಇಲಾಖೆ<br>ದಿನಾಂಕ:12.05.2022

## ಹಿಂಬರಹ

ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನಲ್ಲಿ ಆಯವ್ಯಯ ಭಾಷಣದ ಕಂಡಿಕೆ 204 (ಇ)ರಲ್ಲಿ ಘೋಷಿಸಿರುವಂತೆ ಮಹಿಳಾ ಸ್ವ ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ "ಅಸ್ಮಿತೆ" ಹೆಸರಿನಡಿ ಬ್ರ್ಯಾಂಡಿಂಗ್, ಮೌಲ್ಯವರ್ಧನೆ, ಆಕರ್ಷಣೀಯ ಪ್ಯಾಕಿಂಗ್ ವ್ಯವಸ್ಥೆಯನ್ನು ಒದಗಿಸಿ ರಾಜ್ಯ ಮಟ್ಟದಲ್ಲಿ ಮಾರಾಟ ವ್ಯವಸ್ಥೆ ಮಾರಾಡ ಮೇಳಗಳನ್ನು ನಡೆಸಲು ಅನುಮೋದನೆಯನ್ನು ನೀಡಿ, ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 44 ಕೌಗುಇ 2022, ದಿನಾಂಕ:13.04.2022ರಲ್ಲಿ ಆದೇಶಿಸಲಾಗಿರುತ್ತದೆ. ಆದೇಶದ ಪ್ರತಿಯನ್ನು ಕಡತದಲ್ಲಿರಿಸಿ ಕಡತವನ್ನು ಹಿಂದಿರುಗಿಸಿದೆ

12/05/2022

(ರಂಗನಾಥ)<br>ಸರ್ಕಾರದ ಅಧೀನ ಕಾರ್ಯದರ್ಶಿ,<br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು<br>ಜೀವನೋಪಾಯ ಇಲಾಖೆ.

ಗೆ,<br>ಅಭಿಯಾನ ನಿರ್ದೇಶಕರು,<br>ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್,<br>ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ "ಅಸ್ಮಿತೆ" ಹೆಸರಿನಡಿ ಬ್ರ್ಯಾಂಡಿಂಗ್, ಮೌಲ್ಯವರ್ಧನೆ, ಆಕರ್ಷಣೀಯ ಪ್ಯಾಕಿಂಗ್ ವ್ಯವಸ್ಥೆಯನ್ನು ಒದಗಿಸಿ ರಾಜ್ಯ ಮಟ್ಟದಲ್ಲಿ, ಮಾರಾಟ ವ್ಯವಸ್ಥೆ, ಮಾರಾಟ ಮೇಳಗಳನ್ನು ನಡೆಸುವ ಕುರಿತು.

**ಓದಲಾಗಿದೆ:** 1. 2022-23ನೇ ಸಾಲಿನ ಆಯವ್ಯಯ ಘೋಷಣಾ ಕಂಡಿಕೆ-204(ಇ)
2. ಸಂಜೀವಿನಿ ಕೆಎಸ್‌ಆರ್‌ಎಲ್‌ಪಿಎಸ್ ಇವರ ಪತ್ರ ಸಂಖ್ಯೆ.KSRLPS/LH NF/39/2021-22

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣಾ ಕಂಡಿಕೆ 204(ಇ) "ಸ್ವ ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ ಬ್ರ್ಯಾಂಡಿಂಗ್, ಮೌಲ್ಯವರ್ಧನೆ, ಆಕರ್ಷಣೀಯ ಪ್ಯಾಕಿಂಗ್ ವ್ಯವಸ್ಥೆಯನ್ನು ಒದಗಿಸಿ ಬೃಹತ್ ಮಟ್ಟದಲ್ಲಿ ಮಾರುಕಟ್ಟೆ ವೇದಿಕೆಗಳ ಅವಕಾಶಕ್ಕಾಗಿ "ಅಸ್ಮಿತೆ" ಹೆಸರಿನಡಿ ಎಲ್ಲಾ ಉತ್ಪನ್ನಗಳಿಗೆ ಮಾರಾಟ ವ್ಯವಸ್ಥೆ ಅಭಿವೃದ್ಧಿಪಡಿಸಲಾಗುವುದು. ಈ ಉದ್ದೇಶಕ್ಕಾಗಿ ಹೋಬಳಿ/ಜಿಲ್ಲೆ/ರಾಜ್ಯ ಮಟ್ಟದಲ್ಲಿ ಮಾರಾಟ ಮೇಳಗಳನ್ನು ನಡೆಸಲಾಗುವುದು. ಸರ್ಕಾರದ ವಿವಿಧ ಇಲಾಖೆಗಳಡಿಯಲ್ಲಿ ಮಾಡಲಾಗುವ ಸಂಗ್ರಹಣೆಯಲ್ಲಿ ಸ್ವ-ಸಹಾಯ ಗುಂಪುಗಳಿಂದ ತಯಾರಿಸಲ್ಪಟ್ಟ ಉತ್ಪನ್ನಗಳಿಗೆ ಆದ್ಯತೆ ನೀಡಲಾಗುವುದು." ಮಳಿಗೆಗಳನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:2ರಲ್ಲಿ ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ DAY-NRLM ಕೃಷಿಯೇತರ ಕಿರು ಉದ್ಯಮಗಳನ್ನು ಉತ್ತೇಜಿಸುವುದು ಮತ್ತು ಬಲಪಡಿಸುವುದು ಗ್ರಾಮೀಣ ಮತ್ತು ನಗರ ಜೀವನೋಪಾಯವನ್ನು ಪೋಷಿಸುವ ಪ್ರಮುಖ ಕಾರ್ಯತಂತ್ರವಾಗಿದೆ. ಸಂಜೀವಿನಿ - ಕೆಎಸ್‌ಆರ್‌ಎಲ್‌ಪಿಎಸ್ (ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ) ರಾಷ್ಟ್ರೀಯ ಜೀವನೋಪಾಯ ಮಿಷನ್ ಅಡಿಯಲ್ಲಿ ಸಂಜೀವಿನಿ ಸ್ವಸಹಾಯ ಗುಂಪುಗಳ ಆಯ್ದ ಉತ್ಪನ್ನಗಳ ಮೌಲ್ಯವರ್ಧನೆ ನಡೆಸಲು, 'ಅಸ್ಮಿತೆ' ಹೆಸರಿನಲ್ಲಿ ಉತ್ಪನ್ನ ಬ್ರಾಂಡ್ ಅನ್ನು ಅಭಿವೃದ್ಧಿಪಡಿಸಲು ಮತ್ತು ಸೂಕ್ತ ಮಾರುಕಟ್ಟೆ ವೇದಿಕೆಯನ್ನು "ಅಸ್ಮಿತೆ" ಬ್ರ್ಯಾಂಡಿಂಗ್‌ನಡಿ ಹೋಬಳಿ, ತಾಲ್ಲೂಕು ಜಿಲ್ಲಾ ಮಟ್ಟದಲ್ಲಿ ಪ್ರದರ್ಶನ ಮತ್ತು ಮೇಳ ಆಯೋಜಿಸಲು ಉದ್ದೇಶಿಸಿದೆ. ಅಲ್ಲದೇ ರಾಜ್ಯ ಮಟ್ಟದ 9 ಪ್ರದರ್ಶನ ಮೇಳಗಳನ್ನು ಆಯೋಜಿಸಲು ಈ ಎಲ್ಲಾ ಕಾರ್ಯಕ್ರಮಗಳಿಗಾಗಿ ರೂ.6.75 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 44 ಕೌಗುಇ 2022, ಬೆಂಗಳೂರು, ದಿನಾಂಕ:13-04-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣಾ ಕಂಡಿಕೆ-204(ಇ) ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳಿಗೆ "ಅಸ್ಮಿತೆ" ಹೆಸರಿನಡಿ ಬ್ರ್ಯಾಂಡಿಂಗ್, ಮೌಲ್ಯವರ್ಧನೆ, ಆಕರ್ಷಣೀಯ ಪ್ಯಾಕಿಂಗ್ ವ್ಯವಸ್ಥೆಯನ್ನು ಒದಗಿಸಿ ರಾಜ್ಯ ಮಟ್ಟದಲ್ಲಿ, ಮಾರಾಟ ವ್ಯವಸ್ಥೆ ಮಾರಾಟ ಮೇಳಗಳನ್ನು ನಡೆಸಲು 2022-23ನೇ ಸಾಲಿನಲ್ಲಿ NRLM ಯೋಜನೆಯಡಿಯಲ್ಲಿ ಒದಗಿಸಲಾದ ಅನುದಾನಕ್ಕೆ ತಯಾರಿಸುವ ಕ್ರಿಯಾ ಯೋಜನೆಯಡಿಯಲ್ಲಿ ಸದರಿ ಕಾರ್ಯಕ್ರಮವನ್ನು ಸೇರಿಸಿ ಅನುಷ್ಠಾನಗೊಳಿಸಲು ಆದೇಶಿಸಿದೆ.

--2

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 286 ವೆಚ್ಚ-9/2022, ದಿ.11-04 2022 ಹಾಗೂ ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: PDS/60/MED/2022, ದಿನಾಂಕ:12-04-2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ ಬೆಂಗಳೂರು
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಮಾನವ ಅಭಿವೃದ್ಧಿ ವಿಭಾಗ ಯೋಜನಾ ಇಲಾಖೆ. ಬೆಂಗಳೂರು
5. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್ ರೋಡ್, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ 3& 9, ವಿಧಾನ ಸೌಧ ಬೆಂಗಳೂರು.

**ಪ್ರತಿ:-**

1. ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
5. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.